**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.821/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಮಹಮ್ಮದ್ ಆರೀಫ್ | ಫ್ರಾಸಾ - 2 |
| ತಂದೆಯ ಹೆಸರು | : ಹಸನಬ್ಬ | ಚಾಸಾ - 3 |
| ವಯಸ್ಸು | : 48 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಅಂಬುಲೆನ್ಸ ಚಾಲಕ | ದಿನಾಂಕಃ07.11.2024 |
| ವಾಸಸ್ಥಳ | : ಬಣಕಲ್ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಪರಿಚಯ ಇಲ್ಲ. ಅವರನ್ನು ನಾನು ಈ ಹಿಂದೆ ನೋಡಿಲ್ಲ. ಚಾಸಾ1, 4 ಮತ್ತು ಮೃತ ವಿಶ್ವೇಂದ್ರವರ ಪರಿಚಯ ನನಗೆ ಇಲ್ಲ. ಚಾಸಾ2 ರವರ ಪರಿಚಯ ನನಗೆ ಇದೆ.

ಸಾಕ್ಷಿಯು ನಿಪಿ-1ರ ಶವ ಪಂಚನಾಮೆಯಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-2 ರ ಪೋಟೋದಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ನಿಪಿ-1 ರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಬಿ), ಎಂದು ಗುರುತಿಸಲಾಯಿತು. ಸಾಕ್ಷಿಯು ದಿ.05.11.2023 ರ ಸ್ಥಳ ಪಂಚನಾಮೆಯಲ್ಲಿ ತಮ್ಮ ಸಹಿಯನ್ನು ಗುರುತಿಸಿ ಒಂದು ಪೋಟೋ ಇರುವ ಬಗ್ಗೆ ಗುರುತಿಸುತ್ತಾರೆ. ಸ್ಥಳ ಪಂಚನಾಮೆಯನ್ನು ನಿಪಿ-5, ಸಾಕ್ಷಿಯ ಸಹಿಯನ್ನು ನಿಪಿ-5(ಎ), ಪೋಟೋವನ್ನು ನಿಪಿ-6 ಎಂದು ಗುರುತಿಸಲಾಯಿತು.

ಒಂದು ವರ್ಷದ ಹಿಂದೆ ಬಿದರಹಳ್ಳಿ ಬಳಿ ಅಪಘಾತವಾದ ಬಗ್ಗೆ ಪೊಲೀಸರು ನನ್ನ ಸಹಿಯನ್ನು ಪಡೆದು ಸದರಿ ಸ್ಥಳದಲ್ಲಿ ಪೋಟೋ ತೆಗೆದಿರುತ್ತಾರೆ. ಯಾರ ತಪ್ಪಿನಿಂದ ಅಪಘಾತವಾಗಿದೆ ಮತ್ತು ಯಾವ ಯಾವ ವಾಹನಗಳ ನಡುವೆ ಅಪಘಾತವಾಗಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-5 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಅದೇ ದಿನ ಮೂಡಿಗೆರೆ ಎಂ.ಜಿ.ಎಂ ಆಸ್ಪತ್ರೆಗೆ ಅಂಬುಲೆನ್ಸ ಬಾಡಿಗೆಗೆ ಹೋಗಿದ್ದಾಗ ಪೊಲೀಸರು ನನ್ನನ್ನು ಕೆರದು ಪೋಟೋ ತೆಗೆದು ಸಹಿ ಪಡೆದಿರುತ್ತಾರೆ. ಸದರಿ ಆಸ್ಪತ್ರೆಯ ಶವಗಾರದಲ್ಲಿ ಅಪಘಾತಕ್ಕೀಡಾದ ಒಬ್ಬರ ಮೃತ ದೇಹವಿದ್ದು ಆ ಸಂಬಂಧ ಮಹಜರ್ ಸಾಕ್ಷಿಗೆ ನನ್ನ ಸಹಿ ಪಡೆದು ಪೋಟೋ ತೆಗೆದಿರುತ್ತಾರೆ. ಮೃತ ದೇಹ ಯಾರದ್ದು ಎಂದು ನನಗೆ ಗೊತ್ತಿಲ್ಲ. ಇಷ್ಟನ್ನು ಹೊರತುಪಡಿಸಿ ಪ್ರಕರಣದ ಬಗ್ಗೆ ನನಗೆ ಬೇರೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾಸ.ಸ.ಅ. ರವರಿಂದ:**

ಈಗ ಓದಿ ಹೇಳಿದಂತೆ ದಿ.05.11.2023 ರಂದು ಮೂಡಿಗೆರೆ ಪೋಲಿಸ್ ವೃತ್ತ ನಿರೀಕ್ಷಕರ ಮುಂದೆ

ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.821/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಕೆ.ಎ. ಅಬ್ಬಾಸ್ | ಪ್ರಾಸಾ - 1 |
| ತಂದೆಯ ಹೆಸರು | : ಅಹಮ್ಮದ್ ಕುನ್ನಿ | ಚಾಸಾ - 2 |
| ವಯಸ್ಸು | : 50 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ವಿಜಯವಾಣಿ ಸಂಪಾದಕ | ದಿನಾಂಕಃ07.11.2024 |
| ವಾಸಸ್ಥಳ | : ಕಿರುಗುಂದ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಪರಿಚಯ ಇಲ್ಲ. ಅವರನ್ನು ನಾನು ಈ ಹಿಂದೆ ನೋಡಿಲ್ಲ. ಚಾಸಾ1, 4 ಮತ್ತು ಮೃತ ವಿಶ್ವೇಂದ್ರರವರ ಪರಿಚಯ ನನಗೆ ಇಲ್ಲ. ಚಾಸಾ3 ರವರ ಪರಿಚಯ ನನಗೆ ಇದೆ.

ಸಾಕ್ಷಿಯು ದಿ.05.11.2023 ರ ಶವ ಪಂಚನಾಮೆಯಲ್ಲಿ ತಮ್ಮ ಸಹಿಯನ್ನು ಗುರುತಿಸಿ, ಒಂದು ಭಾವಚಿತ್ರದಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಶವ ಪಂಚನಾಮೆಯನ್ನು ನಿಪಿ-1, ಸಾಕ್ಷಿಯ ಸಹಿಯನ್ನು ನಿಪಿ-1(ಎ), ಪೋಟೋವನ್ನು ಸಿ.ಡಿ ಮತ್ತು ಪ್ರಮಾಣ ಪತ್ರದೊಂದಿಗೆ ನಿಪಿ-2 ರಿಂದ 4 ಎಂದು ಗುರುತಿಸಲಾಯಿತು.

ಒಂದು ವರ್ಷದಿಂದ ಮೂಡಿಗೆರೆ ಎಂ.ಜಿ.ಎಂ ಆಸ್ಪತ್ರೆಯಲ್ಲಿ ಪತ್ರಿಕಾ ವರದಿಗಾಗಿ ಇದ್ದಾಗ ಪೊಲೀಸರು ನನ್ನನ್ನು ಕರೆದು ಪೋಟೋ ತೆಗೆದು ಸಹಿ ಪಡೆದಿರುತ್ತಾರೆ. ಸದರಿ ಆಸ್ಪತ್ರೆಯ ಶವಗಾರದಲ್ಲಿ ಅಪಘಾತಕ್ಕೀಡಾದ ಒಬ್ಬರ ಮೃತ ದೇಹ ವಿದ್ದು ಆ ಸಂಬಂಧ ಮಹಜರ್ ಸಾಕ್ಷಿಗೆ ನನ್ನ ಸಹಿ ಪಡೆದು ಪೋಟೋ ತೆಗೆದಿರುತ್ತಾರೆ. ಮೃತ ದೇಹ ಯಾರದ್ದು ಎಂದು ನನಗೆ ಗೊತ್ತಿಲ್ಲ. ಅಪಘಾತವು ಬಿದರಹಳ್ಳಿಯಲ್ಲಿ ಆಗಿದ್ದೆ ಎಂದು ನನಗೆ ಪೊಲೀಸರು ತಿಳಿಸಿರುತ್ತಾರೆ. ಇಷ್ಟನ್ನು ಹೊರತುಪಡಿಸಿ ಪ್ರಕರಣದ ಬಗ್ಗೆ ನನಗೆ ಬೇರೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾಸ.ಸ.ಅ. ರವರಿಂದ:**

ಸಾಕ್ಷಿಗೆ ನಿಪಿ-1ರ ಸಂಪೂರ್ಣ ಮಾಹಿತಿಯನ್ನು ಓದಿ ಹೇಳಿದ್ದು ಸಾಕ್ಷಿಯು ಅದನ್ನು ಅಲ್ಲಗಳೆಯುತ್ತಾರೆ. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.